# ಪ್ರವಾದಿ ಮಲಾಕಿಯನ ಗ್ರಂಥ

## ಮುನ್ನುಡಿ

ಪ್ರವಾದಿ ಮಲಾಕಿಯನ ಈ ಗ್ರಂಥದ ಕಾಲ ಸುಮಾರು ಕ್ರಿ. ಪೂ. 5ನೇ ಶತಮಾನ. ಜೆರುಸಲೇಮಿನ ಮಹಾದೇವಾಲಯವನ್ನು ಆಗಲೇ ಕಟ್ಟಿ ಮುಗಿಸಲಾಗಿತ್ತು. ದೇವರೊಡನೆ ಮಾಡಿಕೊಂಡ ಒಡಂಬಡಿಕೆಗೆ ಯಾಜಕರು ಮತ್ತು ಭಕ್ತಾದಿಗಳು ಪ್ರಾಮಾಣಿಕರಾಗಿ ನಡೆದುಕೊಳ್ಳಬೇಕು ಎಂದು ಎಚ್ಚರಿಕೆ ನೀಡುವುದೇ ಈ ಗ್ರಂಥದ ಮುಖ್ಯ ಉದ್ದೇಶ. ದೇವಜನರ ನಡವಳಿಕೆಯಲ್ಲಿ, ಆರಾಧನಾ ವಿಧಿಗಳಲ್ಲಿ, ನ್ಯೂನತೆಗಳೂ ಲೋಪದೋಷಗಳೂ ಕಂಡುಬಂದವು. ದೇವರಿಗೆ ಸಲ್ಲತಕ್ಕ ಕಾಣಿಕೆಗಳನ್ನು ಕ್ರಮಬದ್ಧವಾಗಿ ಜನರು ಸಲ್ಲಿಸುತ್ತಿರಲಿಲ್ಲ. ಯಾಜಕರೂ ಜನರೂ ದೇವರ ಬೋಧನೆಗೆ ತಕ್ಕಂತೆ ನಡೆದುಕೊಳ್ಳುತ್ತಿರಲಿಲ್ಲ. ಆದ್ದರಿಂದ ದೇವರಾದ ಸರ್ವೇಶ್ವರ ಬಂದೇ ಬರುವರು. ತಮ್ಮ ಪ್ರಜೆಯನ್ನು ದಂಡಿಸಿ, ಅವರನ್ನು ಪರಿಶುದ್ಧಗೊಳಿಸುವರು. ಅವರು ಬರುವುದಕ್ಕೆ ಮುಂಚೆ ಮಾರ್ಗವನ್ನು ಸಿದ್ಧಗೊಳಿಸಲು ಹಾಗು ಅವರ ಒಡಂಬಡಿಕೆಯನ್ನು ಪ್ರಕಟಿಸಲು ತಮ್ಮ ದೂತನನ್ನು ಮುಂದಾಳಾಗಿ ಕಳುಹಿಸುವರು. ಇದೇ ಈ ಗ್ರಂಥದ ಸಾರಾಂಶ.

## ಪರಿವಿಡಿ


| | | | | |
|---|---|---|---|---|
| 1. ಇಸ್ರಯೇಲಿನ ಅಪರಾಧ | – | 1.1 | – | 2.16 |
| 2. ದೇವರ ದಂಡನೆ ಮತ್ತು ಕರುಣೆ | – | 2.17 | – | 4.6 |


**1** ಮಲಾಕಿಯನ ಮುಖಾಂತರ ಇಸ್ರಯೇಲ್ ಜನರಿಗೆ ಸರ್ವೇಶ್ವರ ನೀಡಿದ ದೈವೋಕ್ತಿ:

### ಇಸ್ರಯೇಲಿನ ಮೇಲೆ ಪ್ರೀತಿ

2 "ನಿಮ್ಮ ಮೇಲೆ ನನಗೆ ಪ್ರೀತಿ ಇದೆ" ಎನ್ನುತ್ತಾರೆ ಸರ್ವೇಶ್ವರ. ನೀವಾದರೋ, "ಯಾವ
ವಿಷಯದಲ್ಲಿ ನಮಗೆ ಪ್ರೀತಿ ತೋರಿಸಿದ್ದೀರಿ?" ಎಂದು ಕೇಳುತ್ತೀರಿ. ಅದಕ್ಕೆ ಅವರು, "ಏಸಾವನು
ಯಕೋಬನ ಅಣ್ಣನಲ್ಲವೇ? ಆದರೂ ನಾನು ಯಕೋಬನನ್ನು ಪ್ರೀತಿಸಿದೆ; 3ಏಸಾವನನ್ನು ದ್ವೇಷಿಸಿದೆ; ಅಲ್ಲದೆ
ಏಸಾವನಿಗೆ ಸೇರಿದ ಮಲೆನಾಡುಗಳನ್ನು ಹಾಳುಮಾಡಿ, ಅವನ ಪಿತ್ರಾರ್ಜಿತ ರಾಜ್ಯವನ್ನು ನಾಯಿನರಿಗಳ
ಬೀಡಾಗಿಸಿದೆ," ಎಂದು ಉತ್ತರಿಸುತ್ತಾರೆ. 4ಏಸಾವನ ವಂಶದವರಾದ ಎದೋಮ್ಯರು, "ನಮ್ಮ ನಾಡು
ಹಾಳಾಯಿತು; ಆದರೆ ಹಾಳುಬಿದ್ದದ್ದನ್ನು ಮರಳಿ ಕಟ್ಟುವೆವು," ಎನ್ನಬಹುದು. ಅದಕ್ಕೆ ಸೇನಾಧೀಶ್ವರ
ಸರ್ವೇಶ್ವರ ಕೊಡುವ ಉತ್ತರ ಇದು: "ಅವರು ಕಟ್ಟಲಿ; ನಾನು ಅವುಗಳನ್ನು ಕೆಡವಿಹಾಕುವೆ. 'ಅವರು
ಕೇಡಿಗರು, ಸರ್ವೇಶ್ವರಸ್ವಾಮಿಯ ಕೋಪಕ್ಕೆ ಗುರಿಯಾದವರು' ಎಂದು ಜನರೇ ಆಡಿಕೊಳ್ಳುವರು."
5ಇಸ್ರಯೇಲಿನ ಜನರಾದ ನೀವು ಇದನ್ನು ಕಣ್ಣಾರೆ ಕಂಡು, "ಸರ್ವೇಶ್ವರ ಇಸ್ರಯೇಲಿನ ಹೊರಗೂ ಮಹಾ
ಮಹಿಮೆಯುಳ್ಳವರು!" ಎಂದು ಹೇಳಿಕೊಳ್ಳುವಿರಿ.

### ಅಯೋಗ್ಯ ಯಾಜಕರಿಗೆ ಶಾಪ

6 "ನನ್ನ ನಾಮವನ್ನು ಅವಮಾನಗೊಳಿಸುವ ಯಾಜಕರೇ, ಮಗನು ತಂದೆಯನ್ನು, ದಾಸನು
ದಣಿಯನ್ನು ಸನ್ಮಾನಿಸುವುದು ಸಹಜ. ನಾನು ತಂದೆಯಾಗಿದ್ದರೂ ನೀವು ನನಗೆ ಸಲ್ಲಿಸುವ ಸನ್ಮಾನವೆಲ್ಲಿ?
ನಾನು ದಣಿಯಾಗಿದ್ದರೂ ನೀವು ನನಗೆ ತೋರಿಸುವ ಭಯಭಕ್ತಿ ಎಲ್ಲಿ?" ಎಂದು ಸೇನಾಧೀಶ್ವರ ಸರ್ವೇಶ್ವರ
ನಿಮ್ಮನ್ನೇ ಕೇಳುತ್ತಾರೆ. ಆದರೆ, ನೀವು: "ಯಾವ ವಿಷಯದಲ್ಲಿ ನಿಮ್ಮ ನಾಮವನ್ನು

ಅವಮಾನಗೊಳಿಸಿದ್ದೇವೆ?” ಎಂದು ಕೇಳುತ್ತೀರಿ. 7“ನನ್ನ ಬಲಿಪೀಠದ ಮೇಲೆ ಅಶುದ್ಧ ಪದಾರ್ಥಗಳನ್ನು
ಅರ್ಪಿಸಿ ನನ್ನನ್ನು ಅವಮಾನ ಗೊಳಿಸಿದ್ದೀರಿ;” “ಯಾವ ವಿಷಯದಲ್ಲಿ ನಿಮಗೆ ಅಗೌರವ ತಂದಿದ್ದೇವೆ
ಎನ್ನುತ್ತೀರೋ? ‘ಸರ್ವೇಶ್ವರಸ್ವಾಮಿಯ ವೇದಿಕೆಗೆ ಘನತೆ ಏನಿದೆ?’ ಎಂದು ಹೇಳಿಕೊಳ್ಳುವುದರಲ್ಲಿದೆ ಆ
ಅಗೌರವ. 8ಕುರುಡಾದ ಪಶುಗಳನ್ನು ಬಲಿಯರ್ಪಿಸುವುದು ತಪ್ಪಲ್ಲವೆ? ಊನವಾದ ರೋಗದ ಪಶುಗಳನ್ನು
ಅರ್ಪಿಸುವುದು ದೋಷವಲ್ಲವೇ? ಸೇನಾಧೀಶ್ವರ ಸರ್ವೇಶ್ವರ ಹೇಳುವುದನ್ನು ಕೇಳಿ: “ಇಂಥದ್ದನ್ನು ನಿಮ್ಮ
ರಾಜಪಾಲನಿಗೆ ಕಾಣಿಕೆಯಾಗಿ ಕೊಟ್ಟರೆ ಅವನು ನಿಮ್ಮನ್ನು ಮೆಚ್ಚುವನೋ ಅಥವಾ ನಿಮ್ಮ ಕೋರಿಕೆಯನ್ನು
ನೆರವೇರಿಸುವನೋ?”

9 ಆದುದರಿಂದ ಯಾಜಕರೇ, ದೇವರ ದಯೆ ನಿಮಗೆ ದೊರಕುವಂತೆ ಅವರನ್ನು ಒಲಿಸಿಕೊಳ್ಳಿರಿ.
ಇಂಥ ಕಾಣಿಕೆ ನಿಮ್ಮ ಕೈಯಲ್ಲಿದ್ದರೆ ಯಾರಿಗಾದರು ದೇವರು ನಿಮ್ಮ ಕೋರಿಕೆಯನ್ನು
ಈಡೇರಿಸುವುದುಂಟೋ? ಇದು ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ ನುಡಿ: 10“ನನ್ನ ಬಲಿಪೀಠದ ಮೇಲೆ
ಯಾರೂ ಜ್ಯೋತಿಯನ್ನು ವ್ಯರ್ಥವಾಗಿ ಬೆಳಗಿಸದಂತೆ ಮಹಾದೇವಾಲಯದ ಬಾಗಿಲನ್ನು ಮುಚ್ಚಿಬಿಟ್ಟರೆ
ಎಷ್ಟೋ ಒಳ್ಳೆಯದು. ನಾನು ನಿಮ್ಮನ್ನು ಮೆಚ್ಚಿಕೊಂಡಿಲ್ಲ. ನಿಮ್ಮ ಕೈಯಿಂದ ಕಾಣಿಕೆಗಳನ್ನು ನಾನು
ಸ್ವೀಕರಿಸುವುದಿಲ್ಲ.” ಇದು ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ ನುಡಿ. 11“ಸೂರ್ಯೋದಯದಿಂದ
ಸೂರ್ಯಾಸ್ತಮದವರೆಗೆ ಸರ್ವರಾಷ್ಟ್ರಗಳಲ್ಲಿ ನನ್ನ ನಾಮಕ್ಕೆ ಮಹಿಮೆ ಸಲ್ಲುವುದು. ಎಲ್ಲೆಲ್ಲಿಯೂ ನನಗೆ
ಧೂಪಾರತಿಯನ್ನೂ ಕಾಣಿಕೆಗಳನ್ನೂ ಜನರು ಅರ್ಪಿಸುವರು. ಹೌದು, ಸರ್ವರಾಷ್ಟ್ರಗಳಲ್ಲಿಯೂ ನನ್ನ ನಾಮಕ್ಕೆ
ಮಹಿಮೆ ಸಲ್ಲುವುದು,” ಎನ್ನುತ್ತಾರೆ ಸೇನಾಧೀಶ್ವರ ಸರ್ವೇಶ್ವರ. 12ನೀವಾದರೋ, ‘ಸರ್ವೇಶ್ವರಸ್ವಾಮಿಯ
ಪೀಠ ಅಶುದ್ಧ; ಅದರ ಮೇಲಿನ ಆಹಾರಪದಾರ್ಥಗಳು ಅಸಹ್ಯ’ ಎಂದು ಹೇಳಿ ನನ್ನ ನಾಮಕ್ಕೆ ಅಪಕೀರ್ತಿ
ತರುತ್ತೀರಿ. 13ಅಯ್ಯೋ, ಎಷ್ಟು ಬೇಸರವಾದುದು ಈ ಸೇವೆ’ ಎಂದುಕೊಂಡು ನೀವು ಅದನ್ನು ತಾತ್ಸಾರ
ಮಾಡುತ್ತೀರಿ. “ಕಳವಿನ ಪಶುವನ್ನು, ರೋಗ ಹಿಡಿದ, ಊನವಾದ ಪ್ರಾಣಿಯನ್ನು ಅರ್ಪಿಸುತ್ತೀರಿ. ಇಂಥ
ಕಾಣಿಕೆಯನ್ನು ನಿಮ್ಮ ಕೈಗಳಿಂದ ನಾನು ಸ್ವೀಕರಿಸಲೋ?” ಎಂದು ಕೇಳುತ್ತಾರೆ ಸೇನಾಧೀಶ್ವರ ಸರ್ವೇಶ್ವರ.
14“ತನ್ನ ಹಿಂಡಿನಲ್ಲಿರುವ ಗಂಡು ಪಶುವನ್ನು ಕೊಡುವುದಾಗಿ ಹರಕೆ ಹೊತ್ತು, ಬದಲಿಗೆ ಕಳಂಕವಾದ
ಪಶುವನ್ನು ಸರ್ವೇಶ್ವರಸ್ವಾಮಿಗೆ ಬಲಿದಾನ ಮಾಡುವವನು ಮೋಸಗಾರ, ಅವನು ಶಾಪಗ್ರಸ್ತ. ನಾನೋ
ರಾಜಾಧಿರಾಜ. ನನ್ನ ನಾಮಕ್ಕೆ ಅನ್ಯರಾಷ್ಟ್ರಗಳೂ ಭಯಪಡುತ್ತವೆ,” ಎನ್ನುತ್ತಾರೆ ಸೇನಾಧೀಶ್ವರ ಸರ್ವೇಶ್ವರ.

**2** ಸೇನಾಧೀಶ್ವರ ಸರ್ವೇಶ್ವರ ಯಾಜಕರಿಗೆ ಹೀಗೆ ಹೇಳುತ್ತಾರೆ: “ನಿಮಗೆ ನಾನು ನೀಡುವ ಆಜ್ಞೆಯಿದು:
2ನನ್ನ ನಾಮಕ್ಕೆ ಮಹಿಮೆ ಸಲ್ಲಿಸಬೇಕು. ಇದನ್ನು ನೀವು ಮನದಟ್ಟು ಮಾಡಿಕೊಳ್ಳಬೇಕು. ನನ್ನ ಈ ಮಾತಿಗೆ
ಕಿವಿಗೊಡದಿದ್ದರೆ ನಿಮಗೆ ಶಾಪವನ್ನು ತರುವೆನು. ನಿಮ್ಮ ವರಮಾನಗಳನ್ನೆಲ್ಲ ಶಾಪವಾಗಿ ಮಾರ್ಪಡಿಸುವೆನು;
ಈಗಾಗಲೇ ಮಾರ್ಪಡಿಸಿರುವೆನು. ನನ್ನ ಆಜ್ಞೆಯನ್ನು ನಿಮ್ಮಲ್ಲಿ ಯಾರೂ ಮನದಟ್ಟು ಮಾಡಿಕೊಂಡಿಲ್ಲ.
3ಆದ್ದರಿಂದ ಇದನ್ನು ಗಮನವಿಟ್ಟು ಕೇಳಿ: ನಿಮ್ಮ ಸಂತಾನವನ್ನು ಖಂಡಿಸುವೆನು. ನಿಮ್ಮ ಮುಖಕ್ಕೆ ಸಗಣಿ
ಬಳಿಯುವೆನು. ನಿಮ್ಮ ಯಜ್ಞಪಶುಗಳ ಸಗಣಿಯನ್ನೇ ಎರಚುವೆನು. ನೀವು ಆ ಸಗಣಿ ತಿಪ್ಪೆಯ ಪಾಲಾಗುವಿರಿ.
4ನಾನು ಲೇವಿಯರೊಂದಿಗೆ ಮಾಡಿಕೊಂಡ ಒಡಂಬಡಿಕೆ ಊರ್ಜಿತವಾಗಬೇಕೆಂದೇ ಈ ಅಪ್ಪಣೆಯನ್ನು
ನಿಮಗೆ ಕೊಟ್ಟಿದ್ದೇನೆಂದು ಆಗ ನಿಮಗೆ ಗೊತ್ತಾಗುವುದು.” ಇದು ಸೇನಾಧೀಶ್ವರ ಸರ್ವೇಶ್ವರ ಸ್ವಾಮಿಯ
ನುಡಿ.

5 “ನಾನು ಲೇವಿಯರೊಂದಿಗೆ ಮಾಡಿಕೊಂಡ ಒಡಂಬಡಿಕೆ ಜೀವದಾತ ಹಾಗು ಬದುಕಿನಲ್ಲಿ ಶಾಂತಿ
ತರುವಂಥ ಒಡಂಬಡಿಕೆ. ಅವರು ಭಯ ಭಕ್ತಿಯಿಂದ ಬಾಳಲೆಂದೇ ನಾನು ಅದನ್ನು ಅವರಿಗೆ ವಿಧಿಸಿದ್ದು.
ಅಂತೆಯೇ ಹಿಂದೆ ಅವರು ನನ್ನಲ್ಲಿ ಭಯಭಕ್ತಿಯಿಟ್ಟು ನಡೆದುಕೊಂಡರು; ನನ್ನ ನಾಮಕ್ಕೆ ಅಂಜಿ ಬಾಳಿದರು.
6ಸತ್ಯಬೋಧೆ ಅವರ ಬಾಯಲ್ಲಿ ನೆಲೆಸಿತ್ತು. ಅವರ ತುಟಿಗಳಿಂದ ಅಪರಾಧವಾದುದೇನೂ ಹೊರಬರಲಿಲ್ಲ.
ಶಾಂತಿಯಿಂದ, ಸದ್ಧರ್ಮದಿಂದ ಅವರು ನನ್ನೊಂದಿಗೆ ಅನ್ಯೋನ್ಯವಾಗಿ ನಡೆದುಕೊಂಡರು. ಹಲವರನ್ನು

ಪಾಪಕ್ಕೆ ವಿಮುಖರಾಗಿಸಿದರು. 7ಯಾಜಕನ ತುಟಿಗಳು ದೈವಜ್ಞಾನದ ದ್ವಾರಗಳು. ಅವನ ಬಾಯಿಂದ ಜನರು ಧರ್ಮೋಪದೇಶವನ್ನು ಕೇಳಬೇಕು. ಅವನು ಸೇನಾಧೀಶ್ವರ ಸರ್ವೇಶ್ವರ ಸ್ವಾಮಿಯ ದೂತನು."

8 "ಈಗಲಾದರೊ, ಯಾಜಕರೇ, ನೀವು ದಾರಿ ತಪ್ಪಿದ್ದೀರಿ. ನಿಮ್ಮ ಉಪದೇಶದಿಂದ ಅನೇಕರು ಮುಗ್ಗರಿಸಿ ಬೀಳುವಂತೆ ಮಾಡಿದ್ದೀರಿ. ಲೇವಿಯ ಒಡಂಬಡಿಕೆಯನ್ನು ಭಂಗಪಡಿಸಿದ್ದೀರಿ." ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ ನುಡಿಯಿದು. 9"ನೀವು ನನ್ನ ಮಾರ್ಗವನ್ನು ಅನುಸರಿಸಲಿಲ್ಲ. ಧರ್ಮಶಾಸ್ತ್ರವನ್ನು ಬೋಧಿಸುವಾಗ ಪಕ್ಷಪಾತ ಮಾಡಿದ್ದೀರಿ. ಆದ್ದರಿಂದ ಎಲ್ಲ ಜನರು ನಿಮ್ಮನ್ನು ಹೀಯಾಳಿಸಿ ಕೀಳಾಗಿ ಕಾಣುವಂತೆ ಮಾಡುವೆನು.

## ಅವಿಧೇಯ ಗೃಹಸ್ಥರಿಗೆ ಶಾಪ

10 ನಮ್ಮೆಲ್ಲರಿಗೂ ತಂದೆ ಒಬ್ಬರೇ ಅಲ್ಲವೇ? ನಮ್ಮೆಲ್ಲರನ್ನು ಸೃಷ್ಟಿಸಿದ ದೇವರು ಒಬ್ಬರೇ ಅಲ್ಲವೇ? ಹೀಗಿರಲು ನಾವು ಒಬ್ಬರಿಗೊಬ್ಬರು ದ್ರೋಹ ಮಾಡುವುದೇಕೆ? ದೇವರು ನಮ್ಮ ಪೂರ್ವಜರೊಡನೆ ಮಾಡಿಕೊಂಡ ಒಡಂಬಡಿಕೆಯನ್ನು ನಾವು ಉಲ್ಲಂಘಿಸುವುದೇಕೆ? 11ಜುದೇಯದ ಜನರು ದ್ರೋಹ ಮಾಡಿದ್ದಾರೆ. ಇಸ್ರಯೇಲಿನಲ್ಲಿಯೂ ಜೆರುಸಲೇಮಿನಲ್ಲಿಯೂ ದುರಾಚಾರ ನಡೆಯುತ್ತಿದೆ. ಯೆಹೂದ್ಯರು ಅನ್ಯದೇವತೆಯನ್ನು ಆರಾಧಿಸುವ ಮಹಿಳೆಯರನ್ನು ಮದುವೆಯಾಗಿ, ಸರ್ವೇಶ್ವರಸ್ವಾಮಿಗೆ ಪ್ರಿಯವಾದ ದೇವಾಲಯವನ್ನು ಹೊಲೆಗೆಡಿಸಿದ್ದಾರೆ. 12ಇಂಥ ಕೃತ್ಯವನ್ನು ಎಸಗುವವನು ಎಂಥ ಕುಟುಂಬಕ್ಕಾದರೂ ಸೇರಿರಲಿ, ಅವನ ಪರವಾಗಿ ಸಾಕ್ಷಿಕೊಡುವವನೇ ಆಗಿರಲಿ – ಅಂಥವನನ್ನು ಸೇನಾಧೀಶ್ವರ ಸರ್ವೇಶ್ವರ ಯಕೋಬನ ಕುಲದಿಂದ ಹೊರಗೆ ಹಾಕುವರು.

13 ನೀವು ಇನ್ನೊಂದು ಕೆಲಸವನ್ನು ಮಾಡುತ್ತೀರಿ: 'ಸರ್ವೇಶ್ವರ ನಮ್ಮ ಕಾಣಿಕೆಗಳನ್ನು ಲಕ್ಷಿಸುವುದಿಲ್ಲ. ನಮ್ಮ ಕೈಯಿಂದ ಅವುಗಳನ್ನು ಪ್ರಸನ್ನತೆಯಿಂದ ಸ್ವೀಕರಿಸುವುದಿಲ್ಲ,' ಎಂದುಕೊಂಡು ನರಳುತ್ತಾ ಗೋಳಾಡುತ್ತಾ ಕಣ್ಣೀರಿನಿಂದ ಬಲಿಪೀಠವನ್ನೇ ಮುಳುಗಿಸಿಬಿಡುತ್ತೀರಿ. 4ಇದಕ್ಕೆ ಕಾರಣವೇನೆಂದು ಕೇಳುತ್ತೀರೋ? ಕಾರಣ ಇದೇ: ನಿನಗೂ ನಿನ್ನ ಹೆಂಡತಿಗೂ ಯೌವನದಲ್ಲಿ ಆದ ವಿವಾಹದ ಒಪ್ಪಂದಕ್ಕೆ ಸರ್ವೇಶ್ವರಸ್ವಾಮಿಯೇ ಸಾಕ್ಷಿ. ಆದರೂ ನಿನ್ನ ಅರ್ಧಾಂಗಿ ಹಾಗು ನ್ಯಾಯವಾದ ಧರ್ಮಪತ್ನಿ ಆದ ಆಕೆಗೆ ದ್ರೋಹಮಾಡಿರುವೆ. 15ದೇವರು ನಿನ್ನ ಮತ್ತು ಆಕೆಯ ತನುಮನಗಳನ್ನು ಒಂದಾಗಿ ಮಾಡಲಿಲ್ಲವೆ? ಅವರ ಉದ್ದೇಶವಾದರೂ ಏನಾಗಿತ್ತು? ದೇವರ ಮಕ್ಕಳಾಗಿ ಬಾಳುವ ಸಂತಾನಪ್ರಾಪ್ತಿಯೇ ಅವರ ಉದ್ದೇಶವಾಗಿತ್ತು. ಆದಕಾರಣ ಯೌವನದಲ್ಲಿ ಮದುವೆಯಾದ ಮಡದಿಗೆ ದ್ರೋಹವೆಸಗದಂತೆ, ಪ್ರತಿಯೊಬ್ಬನೂ ಎಚ್ಚರಿಕೆಯಿಂದಿರಲಿ. 16ಇಸ್ರಯೇಲಿನ ದೇವರಾದ ಸರ್ವೇಶ್ವರ ಹೀಗೆ ಹೇಳುತ್ತಾರೆ: "ವಿವಾಹ ವಿಚ್ಛೇದನವನ್ನು ದ್ವೇಷಿಸುತ್ತೇನೆ. ತನ್ನ ಮಡದಿಗೆ ನಂಬಿಕೆ ದ್ರೋಹವನ್ನೆಸಗುವವನನ್ನು ಹಾಗು ದೌರ್ಜನ್ಯ ತೋರುವವನನ್ನು ಹಗೆ ಮಾಡುತ್ತೇನೆ." ಇದು ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ ನುಡಿ. ಆದ ಕಾರಣ ಮನಃಪೂರ್ವಕವಾಗಿ ಎಚ್ಚರಿಕೆಯಿಂದಿರಿ. ನಿಮ್ಮ ಮಡದಿಗೆ ದ್ರೋಹವೆಸಗದಿರಿ.

## ನ್ಯಾಯತೀರ್ಪಿನ ದಿನ ಸನ್ನಿಹಿತ

17 "ನೀವು ನಿಮ್ಮ ಮಾತುಗಳಿಂದ ಪ್ರಭುವನ್ನು ಬೇಸರಗೊಳಿಸಿದ್ದೀರಿ. 'ಯಾವ ವಿಷಯದಲ್ಲಿ ಅವರನ್ನು ಬೇಸರಗೊಳಿಸಿದ್ದೇವೆ?' ಎನ್ನುತ್ತೀರೋ? 'ಕೆಡುಕರೆಲ್ಲರೂ ದೇವರ ದೃಷ್ಟಿಯಲ್ಲಿ ಒಳ್ಳೆಯವರು. ಅವರೇ ಆತನಿಗೆ ಬೇಕಾದವರು' ಎಂದು ಹೇಳುವುದರಿಂದ: 'ನ್ಯಾಯ ತೀರಿಸುವ ದೇವರೆಲ್ಲಿ?' ಎಂದು ಕೇಳುವುದರಿಂದ."

**3** ಸೇನಾಧೀಶ್ವರ ಸರ್ವೇಶ್ವರ ಹೇಳುವುದನ್ನು ಕೇಳಿ: "ನಾನು ನನ್ನ ದೂತನನ್ನು ಮುಂದಾಗಿ ಕಳುಹಿಸುತ್ತೇನೆ. ನಾನು ಬರಲು ಮಾರ್ಗವನ್ನು ಆತನು ಸಿದ್ಧಗೊಳಿಸುವನು. ನೀವು ಎದುರು ನೋಡುತ್ತಿರುವ ಸರ್ವೇಶ್ವರ

ಇದ್ದಕ್ಕಿದ್ದಂತೆ ತಮ್ಮ ಆಲಯಕ್ಕೆ ಬರುವರು. ಇಗೋ, ನಿಮಗೆ ಪ್ರಿಯನಾದ ದೂತನು ಬರುವನು. ನನ್ನ ಒಡಂಬಡಿಕೆಯನ್ನು ನಿಮಗೆ ಪ್ರಕಟಿಸುವನು."

2 "ಆದರೆ ಆತನು ಬರುವಾಗ ಆತನನ್ನು ಎದುರುಗೊಳ್ಳಬಲ್ಲವನು ಯಾರು? ಆತನ ದರ್ಶನವನ್ನು ಪಡೆದು ಬದುಕಬಲ್ಲವನು ಯಾರು? 3ಆತನು ಅಕ್ಕಸಾಲಿಗನ ಕುಲುಮೆಯ ಬೆಂಕಿಗೂ ಅಗಸನ ಚೌಳಿಗೂ ಸಮಾನನು. ಬೆಳ್ಳಿಯನ್ನು ಶುದ್ಧೀಕರಿಸುವ ಅಕ್ಕಸಾಲಿಗನಂತೆ ಲೇವಿಯ ವಂಶದವರನ್ನು ಶುದ್ಧಗೊಳಿಸುವನು; ಬೆಳ್ಳಿಬಂಗಾರದಂತೆ ಶುದ್ಧೀಕರಿಸುವನು. ಆಗ ಅವರು ಯೋಗ್ಯವಾದ ಕಾಣಿಕೆಗಳನ್ನು ಸರ್ವೇಶ್ವರಸ್ವಾಮಿಗೆ ತಂದೊಪ್ಪಿಸುವರು. 4ಪೂರ್ವದಿನಗಳಲ್ಲಿ, ಪುರಾತನ ಕಾಲದಲ್ಲಿ ಇದ್ದಂತೆ ಜೂದಾ ಮತ್ತು ಜೆರುಸಲೇಮಿನ ಜನರ ಕಾಣಿಕೆಗಳು ಆ ಸ್ವಾಮಿಗೆ ಮೆಚ್ಚುಗೆಯಾಗಿರುವುವು."

5 "ಮಾಟಗಾರರಿಗೆ, ಸೂಳೆಗಾರರಿಗೆ, ಸುಳ್ಳು ಹೇಳುವವರಿಗೆ, ಕೂಲಿಹಿಡಿದು ಕಾರ್ಮಿಕರನ್ನು ಮೋಸಗೊಳಿಸುವವರಿಗೆ, ವಿಧವೆಯರನ್ನು ಮತ್ತು ಅನಾಥರನ್ನು ಬಾಧಿಸುವವರಿಗೆ, ಪ್ರವಾಸಿಗಳಿಗೆ ಅನ್ಯಾಯ ಮಾಡುವವರಿಗೆ – ಅಂತೂ ನನಗಂಜದ ಎಲ್ಲರಿಗೆ, ಬೇಗನೆ ನ್ಯಾಯತೀರಿಸಿ, ದಂಡನೆ ವಿಧಿಸಲು ನಾನು ಬರುವೆನು," ಇದು ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ ನುಡಿ.

**ದಶಮಾಂಶ ಸಲ್ಲಿಸುವುದರಲ್ಲಿ ಮೋಸ**

6 "ಯಕೋಬನ ಕುಲಪುತ್ರರೇ, ನಾನು ಅದಲುಬದಲಾಗದ ಸರ್ವೇಶ್ವರ, ಈ ಕಾರಣದಿಂದ ನೀವು ಅಳಿಯದೆ ಉಳಿದಿದ್ದೀರಿ. 7ನಿಮ್ಮ ಪೂರ್ವಜರ ಕಾಲದಿಂದಲೂ ನನ್ನ ವಿಧಿಗಳನ್ನು ಅನುಸರಿಸದೆ, ಅಡ್ಡದಾರಿ ಹಿಡಿದಿದ್ದೀರಿ. ಈಗ ಮರಳಿ ನನಗೆ ಅಭಿಮುಖರಾಗಿರಿ. ನಾನು ನಿಮಗೆ ಅಭಿಮುಖನಾಗುವೆನು." ಇದು ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ ನುಡಿ. 'ನಾವು ನಿಮಗೆ ಅಭಿಮುಖರಾಗಲು ಏನು ಮಾಡಬೇಕು?' ಎಂದು ಕೇಳುತ್ತೀರೋ? 8ನರಮಾನವನು ದೇವರಿಗೆ ಮೋಸಮಾಡಬಹುದೋ? ಆದರೂ ನೀವು ನನಗೆ ಮೋಸಮಾಡುತ್ತಿದ್ದೀರಿ. 'ನಿಮಗೆ ಹೇಗೆ ಮೋಸಮಾಡುತ್ತಿದ್ದೇವೆ?' ಎಂದು ಕೇಳುತ್ತೀರೋ? ನೀವು ತೆರಬೇಕಾದ ದಶಮಾಂಶದಲ್ಲೂ, ಕೊಡಬೇಕಾದ ಕಾಣಿಕೆಯಲ್ಲೂ ಮೋಸಮಾಡುತ್ತಿದ್ದೀರಿ. 9ನೀವೂ ನಿಮ್ಮ ಜನಾಂಗವೆಲ್ಲವೂ ನನಗೆ ಮೋಸಮಾಡುವುದರಿಂದ ನೀವೆಲ್ಲರೂ ಶಾಪಗ್ರಸ್ತರು. 10ನನ್ನ ಆಲಯದಲ್ಲಿ ಆಹಾರಕ್ಕೆ ಕೊರತೆಯಿಲ್ಲದಿರುವಂತೆ ದಶಮಾಂಶವನ್ನು ಪೂರ್ತಿಯಾಗಿ ನನ್ನ ಭಂಡಾರಕ್ಕೆ ತೆಗೆದುಕೊಂಡು ಬನ್ನಿ. ಆ ಬಳಿಕ ಪರಲೋಕದ ದ್ವಾರಗಳನ್ನು ತೆರೆದು, ತುಂಬಿತುಳುಕುವಷ್ಟು ವರದಾನಗಳನ್ನು ನಿಮ್ಮ ಮೇಲೆ ಸುರಿಸುವೆನೋ ಇಲ್ಲವೋ ಎಂಬುದನ್ನು ಪರೀಕ್ಷಿಸಿನೋಡಿ." ಇದು ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ ನುಡಿ. 11"ನಿಮ್ಮ ಭೂಮಿಯ ಬೆಳೆ ಹುಳುಹುಪ್ಪಟೆಗಳಿಂದ ನಾಶವಾಗದಂತೆ ನೋಡಿಕೊಳ್ಳುವೆನು. ನಿಮ್ಮ ತೋಟದಲ್ಲಿ ದ್ರಾಕ್ಷಿಹಣ್ಣು ಉದುರಿಹೋಗದಂತೆ ಮಾಡುವೆನು. 12ಆಗ ಎಲ್ಲ ರಾಷ್ಟ್ರಗಳು ನಿಮ್ಮನ್ನು ಧನ್ಯರೆಂದು ಹೊಗಳುವರು. ನಿಮ್ಮ ನಾಡು ಚೆಲುವಿನ ನಾಡಾಗಿರುವುದು." ಇದು ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ ನುಡಿ.

**ಅಭಯದಾನ**

13 "ನೀವು ನನಗೆ ಕಠಿಣವಾದ ಮಾತುಗಳನ್ನಾಡಿದ್ದೀರಿ," ಎನ್ನುತ್ತಾರೆ ಸರ್ವೇಶ್ವರ. "ನೀವು, 'ನಿನಗೆ ವಿರುದ್ಧವಾಗಿ ನಾವು ಮಾತನಾಡಿದ್ದೇನು?' ಎಂದು ಕೇಳುತ್ತೀರೋ? 14ದೇವರಿಗೆ ಸೇವೆ ಮಾಡುವುದು ವ್ಯರ್ಥ. ಅವರು ಹೇಳಿದಂತೆ ನಾವು ನಡೆದುಕೊಳ್ಳುವುದರಿಂದ ಪ್ರಯೋಜನವೇನು? ನಮ್ಮ ಕೃತ್ಯಗಳಿಗಾಗಿ ಸೇನಾಧೀಶ್ವರ ಸರ್ವೇಶ್ವರನ ಮುಂದೆ ದುಃಖಪಡುವುದರಿಂದ ಲಾಭವೇನು? 15ಅಹಂಕಾರಿಗಳೇ ಭಾಗ್ಯವಂತರು; ದುಷ್ಕರ್ಮಿಗಳು ಚೆನ್ನಾಗಿ ಅಭಿವೃದ್ಧಿಯಾಗುತ್ತಿದ್ದಾರೆ, ಅಷ್ಟೇ ಅಲ್ಲ, ದೇವರನ್ನೇ ಪರೀಕ್ಷೆಗೆ ಗುರಿಪಡಿಸಿ ಸುರಕ್ಷಿತವಾಗಿದ್ದಾರೆ," ಎಂದು ನೀವು ಹೇಳಿದ್ದೀರಿ. 16ಇಂಥ ಮಾತುಗಳನ್ನು ಕೇಳಿ, ಸರ್ವೇಶ್ವರನಲ್ಲಿ ಭಯಭಕ್ತಿಯುಳ್ಳವರು ತಮ್ಮ ತಮ್ಮಲ್ಲೇ ಮಾತನಾಡಿಕೊಂಡರು. ಸರ್ವೇಶ್ವರ ಅವರಿಗೆ ಕಿವಿಗೊಟ್ಟು ಆಲಿಸಿದರು. ಭಯಭಕ್ತಿಯಿಂದ ತಮ್ಮ ನಾಮಸ್ಮರಣೆ ಮಾಡುವವರ ಹೆಸರುಗಳನ್ನು ತಮ್ಮ ಮುಂದಿದ್ದ ದಾಖಲೆ ಪುಸ್ತಕದಲ್ಲಿ ಬರೆಸಿದರು. 17ಸೇನಾಧೀಶ್ವರ ಸರ್ವೇಶ್ವರ ಇಂತೆನ್ನುತ್ತಾರೆ: "ಇವರು ನನ್ನ

ಜನರು; ನಾನು ಕಾರ್ಯತತ್ಪರನಾಗುವ ದಿನದಂದು ಅವರು ನನಗೆ ಸ್ವಕೀಯ ಜನರಾಗಿರುವರು. ತಂದೆಯೊಬ್ಬನು ತನಗೆ ಸೇವೆ ಮಾಡುವ ಮಗನನ್ನು ಕಾಪಾಡುವಂತೆ ನಾನು ಅವರನ್ನು ಕಾಪಾಡುವೆನು. 18ಆಗ ಸಜ್ಜನರಿಗೂ ದುರ್ಜನರಿಗೂ, ದೇವರಸೇವೆ ಮಾಡುವವರಿಗೂ ಮಾಡದವರಿಗೂ ಇರುವ ವ್ಯತ್ಯಾಸವನ್ನು ಮತ್ತೆ ನೀವು ಮನಗಾಣುವಿರಿ.

**ದೇವರ ದಿನ**

**4** "ಇಗೋ, ಆ ದಿನ ಬರುತ್ತಿದೆ. ಒಲೆಯಂತೆ ಉರಿಯುತ್ತಿದೆ. ಎಲ್ಲ ಅಹಂಕಾರಿಗಳು, ದುಷ್ಕರ್ಮಿಗಳು,
ಒಣಹುಲ್ಲಿನಂತೆ ಆಗಿಹೋಗಿದ್ದಾರೆ. ಆದ್ದರಿಂದ ಬರಲಿರುವ ಆ ದಿನದಂದು ಸುಟ್ಟು ಭಸ್ಮವಾಗುತ್ತಾರೆ. ಬುಡ
ರೆಂಬೆಸಹಿತ ಬೂದಿಯಾಗುತ್ತದೆ," ಎನ್ನುತ್ತಾರೆ ಸೇನಾಧೀಶ್ವರ ಸರ್ವೇಶ್ವರ. 2"ನನ್ನ ನಾಮದಲ್ಲಿ
ಭಯಭಕ್ತಿಯಿಂದ ಇರುವ ನಿಮಗಾದರೋ ಜೀವೋದ್ಧಾರಕನೆಂಬ ಸೂರ್ಯನು ಉದಯಿಸಿ,
ಸುಕ್ಷೇಮವನ್ನೀಯುವ ಕಿರಣಗಳನ್ನು ಬೀರುವನು. ಕೊಟ್ಟಿಗೆಯಿಂದ ಹೊರಬಂದ ಕರುಗಳಂತೆ ನೀವು ಕುಣಿದು
ಕುಪ್ಪಳಿಸುವಿರಿ. 3ನಾನು ಕಾರ್ಯತತ್ಪರನಾಗುವ ದಿನದಂದು ನೀವು ದುಷ್ಟರನ್ನು ತುಳಿದು ಬಿಡುವಿರಿ. ಅವರು
ನಿಮ್ಮ ಕಾಲಡಿಯ ಧೂಳಿಯಾಗುವರು." ಇದು ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ ನುಡಿ.

4 "ನಾನು ನನ್ನ ದಾಸನಾದ ಮೋಶೆಗೆ ಬೋಧಿಸಿದ ಧರ್ಮಶಾಸ್ತ್ರವನ್ನು ಜ್ಞಾಪಕಕ್ಕೆ ತಂದುಕೊಳ್ಳಿ. ಆ ವಿಧಿನಿಯಮಗಳನ್ನು ಆತನಿಗೆ ಹೋರೇಬ್ ಬೆಟ್ಟದಲ್ಲಿ ಕೊಟ್ಟದ್ದು ಇಸ್ರಯೇಲರು ಅವುಗಳನ್ನು ಅನುಸರಿಸಲೆಂದೇ."

5 "ಇಗೋ, ಸರ್ವೇಶ್ವರಸ್ವಾಮಿಯ ಆಗ ಮನದ ಭಯಂಕರ ಮಹಾದಿನ ಬರುವುದಕ್ಕೆ ಮುಂಚೆ
ಪ್ರವಾದಿ ಎಲೀಯನನ್ನು ನಿಮ್ಮಲ್ಲಿಗೆ ಕಳುಹಿಸುವೆನು. 6ನಾನು ಬಂದು ಲೋಕವನ್ನು ಶಪಿಸಿ
ನಾಶಗೊಳಿಸದಂತೆ ಆತನು ಹೆತ್ತವರ ಮನಸ್ಸನ್ನು ಮಕ್ಕಳ ಕಡೆಗೂ, ಮಕ್ಕಳ ಮನಸ್ಸನ್ನು ಹೆತ್ತವರ ಕಡೆಗೂ
ಒಲಿಸಿ ಅವರನ್ನು ಒಂದಾಗಿಸುವನು."